ಲಿಖಿತ ಮೂಲಕ ಉತ್ತರಿಸುವ

# ಕರ್ನಾಟಕ ವಿಧಾನ ಪರಿಷತ್ತು

## ನೂರ ಮೂವತ್ತೆಂಟನೆಯ ಅಧಿವೇಶನ

## ಸೋಮವಾರ, ದಿನಾಂಕ : 22ನೇ ಜುಲೈ, 2019

ಕಳಪೆ ಗುಣಮಟ್ಟದ ಕಟ್ಟಡ ಕಾಮಗಾರಿಗಳ ಬಗ್ಗೆ

ಶ್ರೀ ಎನ್. ಅಪ್ಪಾಜಿಗೌಡ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ):-

427 (665) ಮಾನ್ಯ ಸಮಾಜ ಕಲ್ಯಾಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:-

(ಅ) ಮಂಡ್ಯ ಜಿಲ್ಲೆ, ನಾಗಮಂಗಲ ತಾಲ್ಲೂಕು ಬೆಳ್ಳೂರು ಹೋಬಳಿ ಕಾಳಿಂಗನಹಳ್ಳಿ ಪಂಚಾಯಿತಿ ವ್ಯಾಪ್ತಿಯಲ್ಲಿ ಸಮಾಜ ಕಲ್ಯಾಣ ಇಲಾಖೆಯ ವತಿಯಿಂದ ನಡೆಯುತ್ತಿರುವ ಇಂದಿರಾಗಾಂಧಿ ವಸತಿ ಶಾಲೆ ಕಟ್ಟಡದ ನಿರ್ಮಾಣವಾಗಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಆ) ಬಂದಿದ್ದಲ್ಲಿ, ಸದರಿ ಕಾಮಗಾರಿಯನ್ನು ಯಾವ ಗುತ್ತಿಗೆದಾರರಿಗೆ ನೀಡಲಾಗಿದೆ ; (ಈ ಕಾಮಗಾರಿಯ ಅಂದಾಜು ವೆಚ್ಚದ ಪಟ್ಟಿ, ಅಂತಿಮ ಬಿಲ್ಲು ಮತ್ತು ಪ್ಲಾನ್‌ನೊಂದಿಗೆ ಗುತ್ತಿಗೆದಾರರ ಸಂಪೂರ್ಣ ಮಾಹಿತಿ ನೀಡುವುದು)

(ಇ) ಸದರಿ ಕಟ್ಟಡದ ಕಾಮಗಾರಿ ಕಳಪೆ ಗುಣಮಟ್ಟದಿಂದ ಕೂಡಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ; ಬಂದಿದ್ದಲ್ಲಿ, ಸದರಿ ಕಟ್ಟಡ ಕಾಮಗಾರಿಯ ಗುಣಮಟ್ಟದ ಬಗ್ಗೆ ಗುಣಮಟ್ಟ ಪರಿಶೀಲನಾ ಪಾಧಿಕಾರದಿಂದ ವರದಿ ಪಡೆಯಲಾಗಿದೆಯೇ ; (ವರದಿ ಪ್ರತಿ ಸಲ್ಲಿಸುವುದು)

(ಈ) ಈ ಕಾಮಗಾರಿಗೆ ಸಂಬಂಧಿಸಿದ ಇಂಜಿನೀಯರ್ಗಳು ಮತ್ತು ಗುತ್ತಿಗೆದಾರರ ಮೇಲೆ ಯಾವ ರೀತಿಯ ಕಾನೂನು ಕ್ರಮ ಕೈಗೊಳ್ಳಲಾಗಿದೆ ?